12. ಬಸ್ ನಿಲ್ದಾಣಗಳಲ್ಲಿ, ರೈಲ್ವೇ ಸ್ಟೇಷನ್, ಮುಖ್ಯವಾದ ರಾಷ್ಟ್ರೀಯ ಹೆದ್ದಾರಿಗಳು ಕೂಡುವ ಸ್ಥಳಗಳಲ್ಲಿ ಮತ್ತು ವಿಶೇಷವಾಗಿ ದಾಬಾ ಹೋಟೆಲುಗಳು ಇರುವ ಸ್ಥಳಗಳಲ್ಲಿ ಸಂಶಯಾಸ್ಪದವಾಗಿ ಸಂಚರಿಸುವ ವ್ಯಕ್ತಿಗಳ ತಪಾಸಣೆ ಮಾಡುವುದು.

13. ಕಳವು ಮಾಲುಗಳನ್ನು ತೆಗೆದುಕೊಳ್ಳುವ ಪರಿಚಿತ ವ್ಯಕ್ತಿಗಳ ತಪಾಸಣೆ ಮಾಡುವುದು.

14. ಸೈರನ್ ಅಥವಾ ಅಲಾರಾಮ್ ಅನ್ನು ಸಾಧ್ಯವಿರುವ ಕಡೆ ಅಳವಡಿಸುವುದು.

15. ನಗರ ಹಾಗೂ ಟೌನ್ ಪ್ರದೇಶಗಳಲ್ಲಿ ತಡವಾಗಿ ರಾತ್ರಿ ಹೊತ್ತಿನಲ್ಲಿ ಚಿತ್ರ ಮಂದಿರಗಳಿಂದ ಬರುವ ಸಂಶಯಾಸ್ಪದವಾದ ವ್ಯಕ್ತಿಗಳ ಬಗ್ಗೆ ನಿಗಾ ಇಡುವುದು.

16. ನಗರ ಮತ್ತು ಟೌನುಗಳಲ್ಲಿ ರಾತ್ರಿ ಮತ್ತು ಹಗಲು ಹೊತ್ತಿನ ಪ್ರತಿಕೂಲದ ಸಮಯಗಳಲ್ಲಿ ತಂಗುವ ಜನರನ್ನು ತಪಾಸಣೆ ಮಾಡುವುದು.

ಹುಬ್ಬಳ್ಳಿಯಲ್ಲಿ ಹೈಕೋರ್ಟ್ ಪೀಠ ಸ್ಥಾಪನೆ ಬಗ್ಗೆ

1898 - ಶ್ರೀ ಅಶೋಕ್ ಕಾಟವೆ (ಹುಬ್ಬಳ್ಳಿ - ನಗರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೇ?

ಅ) ಹುಬ್ಬಳ್ಳಿಯಲ್ಲಿ ಹೈಕೋರ್ಟ್ ಪೀಠ ಸ್ಥಾಪನೆ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು?

ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯ ಮಂತ್ರಿಗಳು) :

ಅ) ಸರ್ಕಾರವು ಹುಬ್ಬಳ್ಳಿ - ಧಾರವಾಡ ಅವಳಿ ನಗರದಲ್ಲಿ ಉಚ್ಚ ನ್ಯಾಯಾಲಯದ ಒಂದು ಖಾಯಂ ಪೀಠವನ್ನು ಸ್ಥಾಪಿಸುವ ಪ್ರಸ್ತಾವನೆಯ ಪರವಾಗಿದೆ.

ಹಿರೇಕೆರೂರು ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ಇಲಾಖೆಯಲ್ಲಿ ಆಗಿರುವ ಕಾಮಗಾರಿ

2554 - ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸಣ್ಣ ನೀರಾವರಿ ಇಲಾಖೆಯಿಂದ ಹಿರೇಕೆರೂರು ತಾಲ್ಲೂಕಿನಲ್ಲಿ 1992-93, 93-94, 94-95ನೇ ಸಾಲಿನಲ್ಲಿ ಯಾವ ಯಾವ ಕೆಲಸಗಳನ್ನು ತೆಗೆದುಕೊಳ್ಳಲಾಗಿದೆ. ಎಷ್ಟು ಹಣ ಖರ್ಚು ಮಾಡಲಾಗಿದೆ; (ಎಲ್ಲಾ ಲೆಕ್ಕ ಶೀರ್ಷಿಕೆಯಡಿಯಲ್ಲಿ, ಯೋಜನೆ ಯೋಜನೇತರ ವಿವರವನ್ನೊದಗಿಸುವದು);

ಆ) ನೆರೆ ಹಾವಳಿಯಿಂದ ಪೀಡಿತವಾಗಿದ್ದ ಈ ಇಲಾಖೆಯಿಂದ ಯಾವ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ; ಎಷ್ಟು ಖರ್ಚು ಮಾಡಲಾಗಿದೆ;

ಇ) 1995-96ನೇ ಸಾಲಿನಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಯೋಜನೆ ಹಾಗೂ ಯೋಜನೇತರ ಭಾಗದಲ್ಲಿ ಲೆಕ್ಕ ಶೀರ್ಷಿಕೆವಾರು ನಿಗಧಿಪಡಿಸಿದ ಆರ್ಥಿಕ ಗುರಿ ಎಷ್ಟು

ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್ (ಸಣ್ಣ ನೀರಾವರಿ ರಾಜ್ಯ ಸಚಿವೆಯರು):

ಅ) ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.

ಆ) ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ ಹಿರೇಕೆರೂರು ತಾಲ್ಲೂಕಿನಲ್ಲಿ ನಿಗಧಿಪಡಿಸಿದ ಆರ್ಥಿಕ ಗುರಿ ಈ ರೀತಿ ಇದೆ.

ಇ) 4702 ಸಣ್ಣ ನೀರಾವರಿ ಯೋಜನೆ (ಲಕ್ಷ ರೂ.ಗಳಲ್ಲಿ)

1)	ಕೆರೆ ಹೂಳೆತ್ತುವುದು	6.70
2)	ಕೆರೆ ಕಲ್ಯಾಣ	0.45
3)	ಬ್ಯಾರೇಜ್ ನಿರ್ಮಾಣ	4.30